# ಬೆಂಗಳೂರು ವಿಶ್ವವಿದ್ಯಾಲಯ

**ಜ್ಞಾನಭಾರತಿ, ಬೆಂಗಳೂರು-560056**

**ಸಂಖ್ಯೆ: ಇಎಸ್‌ಟಿ-1/ಇ1/ಸುತ್ತೋಲೆ/2014-20** **ದಿನಾಂಕ: 23.03.2020**

## ಸು ತ್ತೋ ಲೆ

**ವಿಷಯ:** Novel Corona Virus (Covid-19) ವೈರಸ್‌ನ ಸೋಂಕು ತಡೆಗಟ್ಟುವಿಕೆ ಮುಂಜಾಗ್ರತಾ ಕ್ರಮವಾಗಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯವರಿಗೆ ರಜೆ ಘೋಷಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಪತ್ರ ಸಂಖ್ಯೆ: ಇಡಿ 139 ಯುಎನ್ಇ 2020 ದಿನಾಂಕ: 23.03.2020.
2. ಕುಲಪತಿಯವರ ಅನುಮೋದನೆ ದಿನಾಂಕ: 23.03.2020.

*****

Novel Corona Virus (Covid-19) ವೈರಸ್‌ನ ಸೋಂಕು ತಡೆಗಟ್ಟುವಿಕೆ ಮುಂಜಾಗ್ರತಾ ಕ್ರಮವಾಗಿ ಬೆಂಗಳೂರು ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯವರಿಗೆ ದಿನಾಂಕ 24.03.2020 ರಿಂದ 31.03.2020 ರವರೆಗೆ **ಅಭಿಯಂತರರ ವಿಭಾಗ, ಆರೋಗ್ಯ ಕೇಂದ್ರ ಮತ್ತು ಸೆಕ್ಯುರಿಟಿ ವಿಭಾಗಗಳನ್ನು ಹೊರತುಪಡಿಸಿ** ಇನ್ನುಳಿದ ಎಲ್ಲಾ ಕಛೇರಿ ವಿಭಾಗಗಳಿಗೆ ಈ ಕೆಳಗೆ ತಿಳಿಸಿರುವ ಷರತ್ತಿನೊಂದಿಗೆ ರಜೆ ಘೋಷಿಸಲಾಗಿದೆ;

1. ವಿಶ್ವವಿದ್ಯಾಲಯದ ಎಲ್ಲಾ ಬೋಧಕ / ಬೋಧಕೇತರ ಸಿಬ್ಬಂದಿ / ಸಂಶೋಧಕರು ಹಾಗೂ ಇತರೆ ಎಲ್ಲಾ ಸಿಬ್ಬಂದಿಗಳು ದಿನಾಂಕ: 31.03.2020 ರವರೆಗೆ ಮನೆಯಿಂದಲೇ ಕರ್ತವ್ಯ ನಿರ್ವಹಿಸಲು ಸೂಚಿಸಲಾಗಿದೆ;
2. ಬೋಧಕ / ಬೋಧಕೇತರ ಸಿಬ್ಬಂದಿಗಳು ಈ ಅವಧಿಯಲ್ಲಿ ಈ ಕೆಳಕಂಡ ಶೈಕ್ಷಣಿಕ ಚಟುವಟಿಕೆಗಳನ್ನು ತೊಡಗಿಸಿಕೊಳ್ಳುವುದು;

    (ಅ) ಆನ್‌ಲೈನ್ ಮೂಲಕ ಬೋಧನೆ ಮತ್ತು ಆನ್‌ಲೈನ್ ಮೂಲಕ ಮೌಲ್ಯಮಾಪನ ಮಾಡಲು ಅಗತ್ಯವಿರುವ ಪಠ್ಯವಸ್ತು ಅಭಿವೃದ್ಧಿಪಡಿಸುವುದು.

    (ಆ) ಮುಂದಿನ ಶೈಕ್ಷಣಿಕ ವರ್ಷಕ್ಕೆ ಅಗತ್ಯವಿರುವ ಪಠ್ಯ ಯೋಜನೆ/ ಟಿಪ್ಪಣಿಯನ್ನು ಸಿದ್ಧಪಡಿಸುವುದು ಹಾಗೂ ತಾವು ಬೋಧಿಸುವ ವಿಷಯದ ಪಠ್ಯವಸ್ತುವನ್ನು ಅಭಿವೃದ್ಧಿಪಡಿಸುವುದು.

    (ಇ) ಲೇಖನಗಳನ್ನು,ಪತ್ರಿಕೆಗಳನ್ನು ಬರೆಯುವುದು.

    (ಈ) Question Bank ಆಗಿ ವಿನೂತನವಾದ ಪ್ರಶ್ನೆಗಳನ್ನು ಸಿದ್ಧಪಡಿಸುವುದು.

    (ಉ) ಏಕ್ ಭಾರತ್ ಶ್ರೇಷ್ಠ ಭಾರತ್ ಕಾರ್ಯಕ್ರಮಕ್ಕೆ ವಿನೂತನ ಯೋಜನೆಯನ್ನು ಸಿದ್ಧಪಡಿಸುವುದು.

3. ದಿನಾಂಕ: 31.03.2020 ರವರೆಗೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ/ ಸಂಶೋಧಕರು/ ಗುತ್ತಿಗೆ/ ಗೌರವ ಶಿಕ್ಷಕರು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರ ರಜಾ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವುದು.

4. ಬೋಧಕ / ಬೋಧಕೇತರ ಸಿಬ್ಬಂದಿ / ಸಂಶೋಧಕರು/ ಗುತ್ತಿಗೆ/ ಗೌರವ ಶಿಕ್ಷಕರು ಸೇರಿದಂತೆ ಎಲ್ಲಾ ಸಿಬ್ಬಂದಿ ವರ್ಗದವರನ್ನು ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಅವರ ದೂರವಾಣಿ ಸಂಖ್ಯೆಗಳನ್ನು / ಇ-ಮೇಲ್ ವಿಳಾಸಗಳನ್ನು ವಿಶ್ವವಿದ್ಯಾಲಯಕ್ಕೆ ನೀಡತಕ್ಕದ್ದು.

....2

23/3/2020

5. ಈ ರಜಾ ಅವಧಿಯಲ್ಲಿ ಬೋಧಕ / ಬೋಧಕೇತರ ಸಿಬ್ಬಂದಿಗಳು ಯಾವುದೇ ಕಾರಣಕ್ಕೂ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ವಿಶ್ವವಿದ್ಯಾಲಯಕ್ಕೆ ಬೋಧಕ / ಬೋಧಕೇತರ ಸಿಬ್ಬಂದಿಯವರ ಸೇವೆ ಅಗತ್ಯವಿದ್ದಾಗ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.

ಕುಲಸಚಿವರು
23/3/2020

ಅಗತ್ಯ ಕ್ರಮಕ್ಕಾಗಿ:

ವಿಶ್ವವಿದ್ಯಾಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು / ಎಲ್ಲಾ ವಿಭಾಗದ ಮುಖ್ಯಸ್ಥರು / ಪುರುಷ/ಮಹಿಳಾ ವಿದ್ಯಾರ್ಥಿ ನಿಲಯಗಳ ಮುಖ್ಯ ಕ್ಷೇಮಪಾಲಕರ/ಅಧಿಕಾರಿಗಳ/ ಬೋಧಕ / ಬೋಧಕೇತರ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು – ಆದ್ಯ ಗಮನಕ್ಕೆ ಹಾಗೂ ತಮ್ಮ ಅಧೀನಕ್ಕೆ ಒಳಪಡುವ ಎಲ್ಲಾ ಬೋಧಕ / ಬೋಧಕೇತರರು / ವಿದ್ಯಾರ್ಥಿ/ವಿದ್ಯಾರ್ಥಿನಿಯರ ಗಮನಕ್ಕೆ ತರಲು ಕೋರಲಾಗಿದೆ.

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ಇ-ಗವರ್ನೆನ್ಸ್ ಸೆಲ್, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಈ ಸುತ್ತೋಲೆಯನ್ನು ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ ರಾಮನಗರ, ಬೆಂಗಳೂರು ವಿಶ್ವವಿದ್ಯಾಲಯ.
3. ಕಛೇರಿ ಪ್ರತಿ.